## ಕರ್ನಾಟಕ ಸರ್ಕಾರ

ಸಂಖ್ಯೆ:ಸಕನಿ/ಸಿಬ್ಬಂದಿ-3/ಸಿಆರ್- 42/2020-21

ಸಮಾಜ ಕಲ್ಯಾಣ ಆಯುಕ್ತರ ಕಛೇರಿ,
5ನೇ ಮಹಡಿ, ಬಹುಮಹಡಿಗಳ ಕಟ್ಟಡ,
ಬೆಂಗಳೂರು, ದಿನಾಂಕ:/೭-01-2021

## ಅಧಿಕೃತ ಜ್ಞಾಪನ

ವಿಷಯ: ಸಮಾಜ ಕಲ್ಯಾಣ ಇಲಾಖೆಯ ಶೀಘ್ರಲಿಪಿಗಾರರ ವೃಂದದ ಕಲ್ಯಾಣ ಕರ್ನಾಟಕ ಸ್ಥಳೀಯ ವೃಂದ ಹಾಗೂ ಉಳಿಕೆ ಮೂಲ ವೃಂದದ ತಾತ್ಕಾಲಿಕ ಜೇಷ್ಠತಾ ಪಟ್ಟಿಯನ್ನು ದಿನಾಂಕ:01-01-2021 ರಲ್ಲಿದ್ದಂತೆ ಪ್ರಕಟಿಸುವ ಬಗ್ಗೆ.

ಉಲ್ಲೇಖ:
1. ಕರ್ನಾಟಕ ಸರ್ಕಾರಿ ನೌಕರರ (ಜೇಷ್ಠತೆ) ನಿಯಮಗಳು 1957.
2. ಸರ್ಕಾರದ ಅಧಿಕೃತ ಜ್ಞಾಪನಾ ಸಂಖ್ಯೆ: ಸಿಆಸುಇ 07 ಸೇನೆನಿ 96 ದಿನಾಂಕ: 16-07-1996.
3. ಸರ್ಕಾರದ ಅಧಿಕೃತ ಜ್ಞಾಪನಾ ಸಂಖ್ಯೆ: ಸಿಆಸುಇ 32 ಸೇನೆಇ 03 ದಿನಾಂಕ: 10-06-2003.
4. ಸರ್ಕಾರದ ಅಧಿಸೂಚನೆ ಸಂಖ್ಯೆ: ಡಿಪಿಎಆರ್ 06 ಪಿಎಲ್‌ಎಕ್ಸ್ ದಿನಾಂಕ: 06-11-2013.
5. ಸರ್ಕಾರದ ಅಧಿಸೂಚನೆ-1 ಸಂಖ್ಯೆ: ಡಿಪಿಎಆರ್ 43 ಹೆಚ್‌ಕೆಸಿ 2013 ದಿನಾಂಕ: 29-01-2014.

*******

ಕರ್ನಾಟಕ ಸರ್ಕಾರಿ ನೌಕರರ (ಜೇಷ್ಠತೆ) ನಿಯಮ 1957 ರ ನಿಯಮ 10 ರನ್ವಯ ಪ್ರತಿ ವರ್ಷ ಜೇಷ್ಠತಾ ಪಟ್ಟಿಯನ್ನು ಪ್ರಕಟಿಸಬೇಕಾಗಿರುತ್ತದೆ. ಉಲ್ಲೇಖ (2) & (3) ರ ಸರ್ಕಾರದ ಅಧಿಕೃತ ಜ್ಞಾಪನಾಗಳನ್ವಯ ದಿನಾಂಕ: 01-01-2021 ರಲ್ಲಿದ್ದಂತೆ ಜೇಷ್ಠತಾ ಪಟ್ಟಿಯನ್ನು ಪ್ರಕಟಿಸಬೇಕಾಗಿರುತ್ತದೆ.

ಕಲ್ಯಾಣ ಕರ್ನಾಟಕ ಪ್ರದೇಶಕ್ಕೆ ಸಂಬಂಧಿಸಿದಂತೆ, ಉಲ್ಲೇಖ (4) ಮತ್ತು (5) ರ ಸಿಬ್ಬಂದಿ & ಆಡಳಿತ ಸುಧಾರಣಾ ಇಲಾಖೆರವರ ಅಧುಸೂಚನೆಗಳನ್ವಯ ಸ್ಥಳೀಯ ವೃಂದ, ಉಳಿಕೆ ಮೂಲ ವೃಂದದ ಜೇಷ್ಠತಾ ಪಟ್ಟಿಗಳನ್ನು ಪ್ರತಿ ವೃಂದದಲ್ಲಿ ನಿರ್ವಹಿಸಬೇಕಾಗಿರುತ್ತದೆ.

ಸಮಾಜ ಕಲ್ಯಾಣ ಇಲಾಖೆಯ ಶೀಘ್ರಲಿಪಿಗಾರರ ವೃಂದದ ಕಲ್ಯಾಣ ಕರ್ನಾಟಕ ಸ್ಥಳೀಯ ವೃಂದ ಅನುಬಂಧ-1, ಉಳಿಕೆ ಮೂಲ ವೃಂದ ಅನುಬಂಧ-2 ರಲ್ಲಿ ತಾತ್ಕಾಲಿಕ ಜೇಷ್ಠತಾ ಪಟ್ಟಿಯನ್ನು ದಿನಾಂಕ: 01-01-2021 ರಲ್ಲಿದ್ದಂತೆ ಇಲಾಖಾ ವೆಬ್‌ಸೈಟ್ www.sw.kar.nic.in ನಲ್ಲಿ ಪ್ರಕಟಿಸಿದೆ. ಈ ತಾತ್ಕಾಲಿಕ ಜೇಷ್ಠತಾ ಪಟ್ಟಿಗಳನ್ನು ಇ-ಮೇಲ್ ಮೂಲಕ ನಿರ್ದೇಶಕರು, ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆ, ಡಾ:ಬಿ.ಆರ್. ಅಂಬೇಡ್ಕರ್ ಸಂಶೋಧನಾ ಸಂಸ್ಥೆ, ಕರ್ನಾಟಕ ರಾಜ್ಯ ಅನುಸೂಚಿತ ಜಾತಿಗಳು/ ಬುಡಕಟ್ಟುಗಳ ಆಯೋಗ, ಪರೀಕ್ಷಾ ಪೂರ್ವ ತರಬೇತಿ ಸಂಸ್ಥೆ, ಕರ್ನಾಟಕ ರಾಜ್ಯ ಸಫಾಯಿ ಕರ್ಮಚಾರಿಗಳ ಆಯೋಗ ಎಲ್ಲಾ ಜಿಲ್ಲೆಗಳ ಜಂಟಿ / ಉಪ ನಿರ್ದೇಶಕರು, ಸಮಾಜ ಕಲ್ಯಾಣ ಇಲಾಖೆ, ಯೋಜನಾ ಸಮನ್ವಯಾಧಿಕಾರಿಗಳು, ಜಿಲ್ಲಾ ಪರಿಶಿಷ್ಟ ವರ್ಗಗಳ ಕಲ್ಯಾಣಾಧಿಕಾರಿಗಳು ಹಾಗೂ ಎಲ್ಲಾ ತಾಲ್ಲೂಕುಗಳ ಸಹಾಯಕ ನಿರ್ದೇಶಕರು, ಗ್ರೇಡ್-1 & 2, ಸಮಾಜ ಕಲ್ಯಾಣ ಇಲಾಖೆ ರವರುಗಳಿಗೆ ಕಳುಹಿಸಲಾಗಿದೆ.